ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 30–ಬಿ ರಡಿ ನಿಯಮಾನುಸಾರ ನಿವೇಶನ ಹಂಚಿಕೆ ಮಾಡಲು ಗೃಹ ನಿರ್ಮಾಣ ಸಹಕಾರ ಸಂಘಗಳಿಗೆ, ಸಹಕಾರ ಸಂಘಗಳ ನಿಬಂಧಕರು ನಿರ್ದೇಶನ ನೀಡಿರುತ್ತಾರೆ. ನಿವೇಶನ ಹಂಚಿಕೆಯಲ್ಲಿ ಸದಸ್ಯರಿಗೆ ಅನ್ಯಾಯವಾದಲ್ಲಿ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆಯಡಿ ದಾವೆ ಹೂಡಿ ಪರಿಹಾರ ಕಂಡುಕೊಳ್ಳಲು ಅವಕಾಶವಿದೆ.

ಈ) ಆರ್ಥಿಕ ತಃಖ್ತೆಗಳನ್ನು ಪೂರಕ ಮಾಹಿತಿಗಳೊಂದಿಗೆ ಸಕಾಲದಲ್ಲಿ ಸಂಘವು ಒದಗಿಸದ ಕಾರಣ ಲೆಕ್ಕಪರಿಶೋಧನೆ ಬಾಕಿ ಉಳಿದಿರುತ್ತದೆ.

ಸಹಕಾರ ಸಂಘಗಳ ಲೆಕ್ಕಪರಿಶೋಧನೆಯು ಪ್ರತೀ ವರ್ಷವೂ ನಡೆಯುವ ನಿರಂತರ ಹಾಗೂ ಮುಂದುವರೆದ ಪ್ರಕ್ರಿಯೆಯಾಗಿದ್ದು, ಇಂತಹ ಪ್ರಕರಣಗಳಲ್ಲಿ ಅಗತ್ಯ ಅನುಪಾಲನಾ ಕ್ರಮಗಳಿಂದಾಗಿ ಮತ್ತು ಸಮನ್ವಯ ಸಮಿತಿಯ ಸಭೆಗಳಲ್ಲಿ ಚರ್ಚಿಸುವ ಮೂಲಕ ಲೆಕ್ಕಪರಿಶೋಧನೆಯನ್ನು ನಿರ್ವಹಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ರೈತರ ಟ್ರ್ಯಾಕ್ಟರ್‌ಗಳಿಗೆ ಸಬ್ಸಿಡಿ ನೀಡುವುದು

26 (12) ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ): ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

2010–11ರಲ್ಲಿ ಕೃಷಿ ಇಲಾಖೆಯಿಂದ ರೈತರ ಟ್ರ್ಯಾಕ್ಟರ್‌ಗಳಿಗೆ ರೈತರಿಗೆ ಸಬ್ಸಿಡಿ ನೀಡಲು ಆಯವ್ಯಯದಲ್ಲಿ ನಿಗದಿಪಡಿಸಿರುವ ಹಣವೆಷ್ಟು ; ಆ ಪೈಕಿ ಬಿಡುಗಡೆಯಾದ ಹಣವೆಷ್ಟು ; ಫಲಾನುಭವಿಗಳ ಸಂಖ್ಯೆ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು) ?

ಶ್ರೀ ಉಮೇಶ್ ವಿ. ಕತ್ತಿ (ಕೃಷಿ ಸಚಿವರು):

2010–11ನೇ ಸಾಲಿನಲ್ಲಿ ರಾಜ್ಯ ಸರ್ಕಾರದ ಅಧಿಕೃತ ಜ್ಞಾಪನ ಪತ್ರ ಸಂ: ಕೃತೋಇ/31/ಕೃಯೋಕಾ/2010, ದಿನಾಂಕ: 9.4.2010ರ ಅನ್ವಯ ಟ್ರ್ಯಾಕ್ಟರ್‌ಗಳಿಗೆ ಸಹಾಯಧನ ನೀಡುವುದನ್ನು ಸ್ಥಗಿತಗೊಳಿಸಲಾಗಿರುತ್ತದೆ.

ರಸ್ತೆ ದುರಸ್ತಿ

27 (13) ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿಯಿಂದ ಹಾಸನಕ್ಕೆ ಹಾದು ಹೋಗುವ ರಸ್ತೆಯು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಈ ರಸ್ತೆಯ ನಿರ್ಮಾಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು) ?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು):

ಅ) ಚಿಕ್ಕನಾಯಕನಹಳ್ಳಿಯಿಂದ ಹಾಸನಕ್ಕೆ ಒಟ್ಟಾರೆ 78.70 ಕಿ.ಮೀ. ಗಳಷ್ಟು ಅಂತರವಿದ್ದು, ಈ ರಸ್ತೆಯ 24.00 ಕಿ.ಮೀ. ಉದ್ದವು ಚಿಕ್ಕನಾಯಕನಹಳ್ಳಿ–ತಿಪಟೂರು ಜಿಲ್ಲಾ ಮುಖ್ಯ ರಸ್ತೆಯು ಹಾಗೂ 58.70 ಕಿ.ಮೀ. ಉದ್ದದ ತಿಪಟೂರು–ಹಾಸನ ರಾಜ್ಯ ಹೆದ್ದಾರಿ ಸಂಖ್ಯೆ 71 ಆಗಿದ್ದು, ಈ ರಸ್ತೆಯು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) 2010–11ರ ಪ್ರಸಕ್ತ ಸಾಲಿನಲ್ಲಿ ಒಟ್ಟಾರೆ ರೂ. 65.21 ಲಕ್ಷಗಳಲ್ಲಿ ಸದರಿ ರಸ್ತೆಯಲ್ಲಿನ ಗುಂಡಿಗಳನ್ನು ಮುಚ್ಚಿ ನಿರ್ವಹಣೆ ಮಾಡುವ ಕೆಲಸವನ್ನು ಕೈಗೆತ್ತಿಕೊಳ್ಳಲಾಗುತ್ತಿದೆ.